# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪ್ರಾದೇಶಿಕ ಸಂಪರ್ಕ ಯೋಜನೆ–ಉಡಾನ್ (RCS-UDAN) ರಡಿ ಆಯ್ಕೆಯಾದ ವಿಮಾನ ನಿಲ್ದಾಣಗಳಿಗೆ ಒದಗಿಸಲಾದ Airport Rescue and Fire Fighting Services & Security Equipments ಶುಲ್ಕವನ್ನು ಮರುಪಾವತಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ನಾಗರೀಕ ವಿಮಾನಯಾನ ಮಂತ್ರಾಲಯ (MoCA) ಭಾರತ ಸರ್ಕಾರ, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ (AAI) ಹಾಗೂ ಕರ್ನಾಟಕ ಸರ್ಕಾರದ ನಡುವೆ ಮಾಡಿಕೊಂಡಿರುವ ಒಡಂಬಡಿಕೆ (MoU) ದಿನಾಂಕ:20.04.2017.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಮೂಲಅಇ 90 ರಾಅವಿ 2016, ದಿನಾಂಕ: 28.04.2017.
3. ಸರ್ಕಾರದ ಆದೇಶ ಸಂಖ್ಯೆ: ಮೂಲಅಇ 22 ನಮುಯೋ 2020, ದಿನಾಂಕ:15.04.2021.
4. ಜನರಲ್ ಮ್ಯಾನೇಜರ್(ಎಫ್&ಎ)-ಆರ್‌ಸಿಎಸ್, ಪ್ರಾದೇಶಿಕ ವಿಮಾನಯಾನ ಸಂಪರ್ಕ ನಿಧಿ ಇವರ ಪತ್ರ ಸಂಖ್ಯೆ: AAI/RAU/SR/RCS/Karnataka OS Dues/, ದಿನಾಂಕ:27.07.2021.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಪ್ರಾದೇಶಿಕ ಸಂಪರ್ಕ ಯೋಜನೆ-ಉಡಾನ್ (RCS-UDAN)ನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ನಾಗರೀಕ ವಿಮಾನಯಾನ ಮಂತ್ರಾಲಯ (MoCA), ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ (AAI) ಹಾಗೂ ಕರ್ನಾಟಕ ಸರ್ಕಾರದ ನಡುವೆ ದಿನಾಂಕ:20.04.2017 ರಂದು ಒಡಬಂಡಿಕೆಯನ್ನು ಮಾಡಿಕೊಂಡಿರುತ್ತದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಅಧಿಸೂಚನೆಯನುಸಾರ RCS ರಡಿ ಆಯ್ಕೆಯಾಗಿರುವ ಏರ್‌ಲೈನ್ ಆಪರೇಟರ್‌ಗಳಿಗೆ ಕೇಂದ್ರ ಸರ್ಕಾರದಿಂದ ನೀಡುತ್ತಿರುವ ವಿಜಿಎಫ್ ಮೊತ್ತದಲ್ಲಿ ರಾಜ್ಯ ಸರ್ಕಾರದ ಪಾಲಿನ ಶೇಕಡ 20ರಷ್ಟು ವಿಜಿಎಫ್ ಅನ್ನು ಆಯ್ಕೆಯಾದ ವಿಮಾನ ನಿಲ್ದಾಣಗಳಿಗೆ ಭರಿಸಬೇಕಾಗಿರುತ್ತದೆ. ಅದರಂತೆ, RCS ರಡಿ ಆಯ್ಕೆಯಾದ ವಿಮಾನ ನಿಲ್ದಾಣಗಳಿಗೆ ವಿಮಾನ ನಿಲ್ದಾಣ ರಕ್ಷಣೆ, ಅಗ್ನಿಶಾಮಕ ಸೇವೆ ಮತ್ತು ಭದ್ರತಾ ಉಪಕರಣಗಳ (Airport Rescue and Fire Fighting Services & Security Equipment) ಸೇವೆಗಳು ಹಾಗೂ ಕೆಲವು ರಿಯಾಯಿತಿಗಳನ್ನು ನೀಡಲಾಗಿರುತ್ತದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಆದೇಶದಲ್ಲಿ 2021-22ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ "3451-00-090-1-18-059-ಪ್ರಾದೇಶಿಕ ವಾಯುಸಂಪರ್ಕ-ಇತರ ಖರ್ಚುಗಳು" ರಡಿಯಲ್ಲಿ ರೂ.4700.00 ಲಕ್ಷಗಳನ್ನು ಒದಗಿಸಲಾಗಿದ್ದು, ಸದರಿ ಲೆಕ್ಕ ಶೀರ್ಷಿಕೆಯಲ್ಲಿ ಖಜಾನೆ-2ರಡಿ ರೂ.8,40,00,565.00/- ಮೊತ್ತ ಬಿಡುಗಡೆಗೆ ಲಭ್ಯವಿರುತ್ತದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಪತ್ರದಲ್ಲಿ GM (F&A)-RCS, MoCA ಇವರು RCS-UDAN ಕುರಿತಂತೆ ನಾಗರಿಕ ವಿಮಾನಯಾನ ಸಚಿವಾಲಯ, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ ಮತ್ತು ರಾಜ್ಯ ಸರ್ಕಾರದ ನಡುವೆ ಆಗಿರುವ ದಿನಾಂಕ:20.04.2017ರ ಒಡಂಬಡಿಕೆಯನ್ವಯ RCS-UDANರಡಿಯಲ್ಲಿನ ಮೈಸೂರು, ವಿದ್ಯಾನಗರ, ಹುಬ್ಬಳ್ಳಿ, ಕಲಬುರಗಿ ಮತ್ತು ಬೆಳಗಾವಿ ವಿಮಾನ

16/11/21

...2

ನಿಲ್ದಾಣಗಳಿಗೆ Airport Rescue and Fire Fighting Services & Security Equipment ಸೇವೆಗಳ ಬಾಬ್ತು (ದಿನಾಂಕ:01.01.2021 ರಿಂದ 30.06.2021ರವರೆಗೆ) ಒಟ್ಟು ರೂ.5,68,20,821.10/-ಗಳನ್ನು ರಾಜ್ಯ ಸರ್ಕಾರದಿಂದ ಮರುಪಾವತಿಸುವಂತೆ ಕೋರಿರುತ್ತಾರೆ.

5. ಪ್ರಸ್ತಾವನೆಯನ್ನು ಕೂಲಕುಂಶವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಮೂಅಇ 143 ರಾಅವಿ 2020,**
**ಬೆಂಗಳೂರು, ದಿನಾಂಕ: 15.11.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, Airport Rescue and Fire Fighting Services & Security Equipments ನೇಮಕಾತಿ ಶುಲ್ಕ ರೂ.5,68,20,821/-(ಐದು ಕೋಟಿ ಅರವತ್ತೆಂಟು ಲಕ್ಷದ ಇಪ್ಪತ್ತು ಸಾವಿರದ ಎಂಟು ನೂರಾ ಇಪ್ಪತ್ತೊಂದು ರೂಪಾಯಿಗಳು ಮಾತ್ರ) ಅನುದಾನವನ್ನು ಕೆ.ಎಸ್.ಐ.ಐ.ಡಿ.ಸಿ ನಿಯಮಿತದ ಮುಖಾಂತರ ನಾಗರೀಕ ವಿಮಾನಯಾನ ಮಂತ್ರಾಲಯ, ಭಾರತ ಸರ್ಕಾರ ಇವರಿಗೆ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಮರುಪಾವತಿಸಲು ಮಂಜೂರಾತಿ ನೀಡಿದೆ.

- ಸರ್ಕಾರದ ಅಧಿಸೂಚನೆ ದಿನಾಂಕ:28.04.2017ರನ್ವಯ ಹಾಗೂ ಆರ್‌ಸಿಎಸ್-ಉಡಾನ್ ಯೋಜನೆಯಡಿಯಲ್ಲಿನ ಕೇಂದ್ರ ನಾಗರೀಕ ವಿಮಾನಯಾನ ಮಂತ್ರಾಲಯ (MoCA)ಮತ್ತು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (AAI) ಇವರು ರಾಜ್ಯ ಸರ್ಕಾರದೊಂದಿಗೆ ಮಾಡಿಕೊಂಡಿರುವ ದಿನಾಂಕ:20.04.2017ರ ಒಡಂಬಡಿಕೆಯನುಸಾರ ಕ್ರಮವಹಿಸುವುದು ಹಾಗೂ ಬಿಡುಗಡೆಗೂ ಮುನ್ನ ಪರಿಶೀಲಿಸಿ ನಂತರ ಬಿಡುಗಡೆ ಮಾಡತಕ್ಕದ್ದು

2. ಈ ವೆಚ್ಚವನ್ನು 2021-22ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ "3451-00-090-1-18-059- ಪ್ರಾದೇಶಿಕ ವಾಯು ಸಂಪರ್ಕ –ಇತರೆ ಖರ್ಚುಗಳು" ರಡಿಯಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

3. ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ ನಿಯಮಿತ, ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ತೆಗೆಯಲು ಅನುಮತಿಸಿದೆ.

4. ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2021, ದಿನಾಂಕ:05.04.2021ರಲ್ಲಿ ನೀಡಿರುವ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Kan

**(ಎಸ್.ಎನ್. ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು
ಮತ್ತು ಒಳನಾಡು ಜಲಸಾರಿಗೆ ಇಲಾಖೆ,

**ಗೆ:**

1. ಪ್ರಧಾನ ಮಹಾಲೇಖಪಾಲರು (ಆಡಿಟ್-1,2,3A & E), ಪ್ರಧಾನ ಮಹಾಲೇಖಪಾಲರ ಕಛೇರಿ, ಎಎಡಿ ಸೆಕ್ಷನ್, ಕೆ.ಪಿ.ಎಸ್.ಸಿ.ಕಛೇರಿ ಎದುರು, ಬೆಂಗಳೂರು,

2. **ವ್ಯವಸ್ಥಾಪಕ** ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
3. ಆಯುಕ್ತರು/ನಿರ್ದೇಶಕರು, ಖಜಾನೆ ಇಲಾಖೆ, ಕೆ.ಪಿ ಸಿಎಲ್ ಕಟ್ಟಡ, ಬೆಂಗಳೂರು.
4. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು
5. ಅಪರ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಕಾರ್ಯಕ್ರಮ, ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1,) ವಿಧಾನ ಸೌಧ, ಬೆಂಗಳೂರು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ, ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.